## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1066
ಸದಸ್ಯರ ಹೆಸರು : ಡಾ ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 17.03.2025
ಉತ್ತರಿಸುವವರು : ಮಾನ್ಯ ಉನ್ನತ ಶಿಕ್ಷಣ ಸಚಿವರು.

| | ಪ್ರಶ್ನೆ | ಉತ್ತರ |
|---|---|---|
| ಅ) | ಸರಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಎಷ್ಟು ಅತಿಥಿ ಉಪನ್ಯಾಸಕರನ್ನು ಮತ್ತು ಯಾವ ಕಾರಣಕ್ಕಾಗಿ ವಜಾ ಮಾಡಲಾಗಿದೆ; | 2023-24ನೇ ಸಾಲಿನಲ್ಲಿ ಲಭ್ಯವಾಗಿದ್ದ ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ಒಟ್ಟು 10976 ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸಿದ್ದು, ಇಲಾಖೆಯಲ್ಲಿ ನಡೆಸಲಾದ ಸಾಮಾನ್ಯ ಮತ್ತು ವಿಶೇಷ ವರ್ಗಾವಣೆ ಹಾಗೂ ಹೊಸದಾಗಿ ನೇಮಕಾತಿ ಹೊಂದಿದ ಖಾಯಂ ಉಪನ್ಯಾಸಕರು ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವುದರಿಂದ ಪ್ರಸ್ತುತ ಲಭ್ಯವಿರುವ ಹೆಚ್ಚುವರಿ ಕಾರ್ಯಭಾರಕ್ಕೆ ಒಟ್ಟು 8371 ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದು, ಕಾರ್ಯಭಾರದ ಕೊರತೆಯ ಹಿನ್ನೆಲೆಯಲ್ಲಿ ಒಟ್ಟು 2605 ಅತಿಥಿ ಉಪನ್ಯಾಸಕರು ಕರ್ತವ್ಯದಿಂದ ಹೊರಗುಳಿದಿದ್ದಾರೆ. |
| ಆ) | ನೂತನ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಮತ್ತು ಈಗ ಕೆಲಸ ಮಾಡುತ್ತಿರುವ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಪ್ರಾಧ್ಯಾಪಕರ ವರ್ಗಾವಣೆಯ ಕಾರಣಕ್ಕಾಗಿ ತೊಂದರೆಗೆ ಒಳಗಾಗಿರುವ ಸಾವಿರಾರು ಅತಿಥಿ ಉಪನ್ಯಾಸಕರ ಭವಿಷ್ಯ ಏನು; | ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಕಾರ್ಯಭಾರಕ್ಕನುಗುಣವಾಗಿ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು, ಅದರಂತೆ ಸಂಬಂಧಪಟ್ಟ ವಿಷಯದಲ್ಲಿ ಕಾರ್ಯಭಾರ ಕೊರತೆಯಾದಲ್ಲಿ ಅತಿಥಿ ಉಪನ್ಯಾಸಕರನ್ನು ಕರ್ತವ್ಯದಿಂದ ಬಿಡುಗಡೆ ಮಾಡುವುದು ನಿಯಮವಿರುತ್ತದೆ. ಈ ಕುರಿತು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಕಾಶಿಇ/ನೇವಿ-1/ಅಉಆ/90/2023-24, ದಿನಾಂಕ:06.10.2023ರ ಕ್ರಮ ಸಂಖ್ಯೆ.15ರಲ್ಲಿ "ಹೊಸ ನೇಮಕಾತಿ/ವರ್ಗಾವಣೆ/ ನಿಯೋಜನೆ ಹಾಗೂ ಇನ್ನಿತರ ಕಾರಣದಿಂದಾಗಿ ಖಾಯಂ ಉಪನ್ಯಾಸಕರು ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾದಾಗ ಅಥವಾ ಸೆಮಿಸ್ಟರ್ ಅವಧಿಯಲ್ಲಿ ಕಾರ್ಯಭಾರ ಕಡಿಮೆಯಾದಾಗ ಅಥವಾ ಇತರೆ ಕಾರಣಗಳಿಂದ ಕಾರ್ಯಭಾರ ಕೊರತೆಯಾದಲ್ಲಿ ಆ ಕಾಲೇಜಿಗೆ ಸಂಬಂಧಪಟ್ಟ ವಿಷಯದಲ್ಲಿ ಕೊನೆಯದಾಗಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸುವುದಾಗಿ ಆಯ್ಕೆ ಪೂರ್ವದಲ್ಲಿಯೇ ತಿಳಿಸಲಾಗಿದೆ. |
| ಇ) | ಯು.ಜಿ.ಸಿ., ಆದೇಶದಂತೆ ಪಿ. ಹೆಚ್.ಡಿ. ಇಲ್ಲದ ಅಥವಾ ನೆಟ್/ಸೆಟ್ ಪಾಸಾಗದ ಅತಿಥಿ ಉಪನ್ಯಾಸಕರು ಹತ್ತಾರು ವರ್ಷಗಳಿಂದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಈ ರೀತಿಯ ಸುಮಾರು 5 ಸಾವಿರ ಅತಿಥಿ ಉಪನ್ಯಾಸಕರನ್ನು ಮುಂದುವರಿಸಲು ಮತ್ತು ಅವರ ಸೇವಾ ಭದ್ರತೆ ಕುರಿತು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; | ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022ರ ಕಂಡಿಕೆ(6) ರಲ್ಲಿ "ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರಿಗೆ ನಿಗಧಿತ ವಿದ್ಯಾರ್ಹತೆಯನ್ನು ಹೊಂದಲು 3 ವರ್ಷಗಳ ಕಾಲಾವಧಿ ನೀಡುವುದು, 3 ವರ್ಷಗಳ ನಂತರ ಯು.ಜಿ.ಸಿ. ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದ ಅತಿಥಿ ಉಪನ್ಯಾಸಕರ ನೇಮಕಾತಿಯನ್ನು ಸಂಪೂರ್ಣವಾಗಿ ನಿರ್ಬಂಧಿಸುವುದು" ಎಂಬುದಾಗಿ ಆದೇಶಿಸಲಾಗಿರುತ್ತದೆ. |

| | | |
|---|---|---|
| | | ಅಲ್ಲದೆ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿ ಸಂಖ್ಯೆ:23600/2023ಕ್ಕೆ ಮಾನ್ಯ ನ್ಯಾಯಾಲಯವು ದಿನಾಂಕ:05.09.2024ರಂದು ತೀರ್ಪು ನೀಡಿ, ಅತಿಥಿ ಉಪನ್ಯಾಸಕರ ಆಯ್ಕೆಗೆ ಯು.ಜಿ.ಸಿ. ವಿದ್ಯಾರ್ಹತೆ (ಎನ್ಇಟಿ/ಎಸ್ಎಲ್ಇಟಿ/ಪಿಹೆಚ್.ಡಿ) ಮಾನದಂಡವನ್ನು ಅನುಸರಿಸುವಂತೆ ಆದೇಶಿಸಿರುತ್ತದೆ. ಸದರಿ ದಿನಾಂಕ:05.09.2024ರ ತೀರ್ಪನ್ನು ಪುನರ್ ಪರಿಶೀಲಿಸಲು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ:1578/2024ನ್ನು ದಾಖಲಿಸಲಾಗಿದ್ದು, ಪ್ರಸ್ತುತ ವಿಚಾರಣೆ ಹಂತದಲ್ಲಿರುತ್ತದೆ.<br><br>ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉನ್ಯಾಸಕರಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ. |
| ಈ) | ಅತಿಥಿ ಉಪನ್ಯಾಸಕರು ಪ್ರತಿ ವರ್ಷ ಎದುರಿಸುತ್ತಿರುವ ಅತಂತ್ರ ಸ್ಥಿತಿಗಳು, ಸೇವಾ ಹಿರಿತನದಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಸರಕಾರವು ಸ್ಪಷ್ಟವಾಗಿ ಒಂದು ನೀತಿ ರೂಪಿಸಿ ಅವರ ಸಹಾಯಕ್ಕೆ ನಿಲ್ಲಲು ಕಠಿಣ ಕ್ರಮಗಳನ್ನು ಕೈಗೊಳ್ಳುವುದು ಯಾವಾಗ? | ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಬೋಧನಾ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ.<br><br>ಪ್ರತಿ ವರ್ಷವೂ ಅತಿಥಿ ಉಪನ್ಯಾಸಕರನ್ನು ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಮಾತ್ರ ತಾತ್ಕಾಲಿಕ ವ್ಯವಸ್ಥೆಯಡಿ ನೇಮಕ ಮಾಡಲಾಗುವುದರಿಂದ ಖಾಯಂ ಉಪನ್ಯಾಸಕರು ಹೊಸ ನೇಮಕಾತಿ/ವರ್ಗಾವಣೆ/ನಿಯೋಜನೆ ಇತ್ಯಾದಿ ಕಾರಣಗಳಿಂದ ಸಂಬಂಧಪಟ್ಟ ಕಾಲೇಜುಗಳಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ಸಂದರ್ಭದಲ್ಲಿ ಬೋಧನಾ ಕಾರ್ಯಭಾರದಲ್ಲಿ ಕೊರತೆಯಾದಾಗ ಆ ಕಾಲೇಜಿನ ಜ್ಯೇಷ್ಠತೆಯಲ್ಲಿ ಕಿರಿಯ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಬಿಡುಗಡೆಗೊಳಿಸಬೇಕಾಗಿದ್ದು, ಇದು ಸರ್ಕಾರದ ನಿಯಮಗಳನ್ವಯ ಸಹಜ ಪ್ರಕ್ರಿಯೆಯಾಗಿರುತ್ತದೆ. ಇದನ್ನು ಅತಿಥಿ ಉಪನ್ಯಾಸಕರ ನೇಮಕ ಸಂದರ್ಭದಲ್ಲಿ ಅವರ ಗಮನಕ್ಕೂ ಸಹ ತರಲಾಗಿರುತ್ತದೆ.<br><br>ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಸೇವಾ ಹಿರಿತನಕ್ಕೆ ಆದ್ಯತೆ ನೀಡಿ, ಹೆಚ್ಚಿನ ಅಂಕಗಳನ್ನು ನಿಗಧಿಪಡಿಸಲಾಗಿದ್ದು, ಅದರನ್ವಯ ಸೇವಾ ಹಿರಿತನ |

| | | |
|---|---|---|
| | | ಹೊಂದಿದ ಅತಿಥಿ ಉಪನ್ಯಾಸಕರನ್ನು ಆಯ್ಕೆಗೆ ಪರಿಗಣಿಸಲಾಗುತ್ತಿದೆ. ಸೇವಾ ಹಿರಿತನವನ್ನು ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸಿದ ಅವಧಿಯನ್ನು ಪರಿಗಣಿಸಿ, ಸಂಬಂದಪಟ್ಟ ಪ್ರಾಂಶುಪಾಲರು ದೃಢೀಕರಿಸುತ್ತಾರೆ. ಇದರಲ್ಲಿ ಯಾವುದೇ ತಾರತಮ್ಯಕ್ಕೆ ಅವಕಾಶವಿರುವುದಿಲ್ಲ. |

**ಸಂಖ್ಯೆ:ಇಡಿ 100 ಡಿಸಿಇ 2025(ಇ)**

**(ಡಾ ಎಂ. ಸಿ ಸುಧಾಕರ್)**
ಉನ್ನತ ಶಿಕ್ಷಣ ಸಚಿವರು,